## ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

**ವಿಷಯ:–** ಡಾ. ಸರೋಜಿನಿ ಮಹಿಷಿ ಸಮಿತಿ ಮತ್ತು ಕನ್ನಡಿಗರ ಉದ್ಯೋಗ ಸಮಿತಿಯು ಸಲ್ಲಿಸಿರುವ ವರದಿಗಳಲ್ಲಿರುವ ಶಿಫಾರಸ್ಸುಗಳನ್ನು ಅಂಗೀಕರಿಸುವ ಬಗ್ಗೆ.

**ಪ್ರಸ್ತಾವನೆ:**

ಕನ್ನಡಿಗರ ಉದ್ಯೋಗ ಸಮಿತಿಯು ಸಲ್ಲಿಸಿರುವ ಮಧ್ಯಕಾಲಿಕ ವರದಿಯಲ್ಲಿ ಶಿಫಾರಸುಗಳನ್ನು ಪರಿಶೀಲಿಸಲು ಸರ್ಕಾರಿ ಆದೇಶ ಸಂಖ್ಯೆ: ಡಿಪಿಎಆರ್ ೨೭ ಎಸ್‌ಎಲ್‌ಸಿ ೮೯ ದಿನಾಂಕ ೧೬ನೇ ಮಾರ್ಚಿ ೧೯೯೦ರಲ್ಲಿ ಸಚಿವ ಸಂಪುಟದ ಉಪ ಸಮಿತಿಯನ್ನು ರಚಿಸಲಾಗಿತ್ತು. ಈ ಸಚಿವ ಸಂಪುಟದ ಉಪ ಸಮಿತಿಯು ಡಾ. ಸರೋಜಿನಿ ಮಹಿಷಿ ಸಮಿತಿ ವರದಿಯಲ್ಲಿರುವ ಶಿಫಾರಸುಗಳನ್ನು ಪರಿಶೀಲಿಸಿ ಸಲ್ಲಿಸಿದ ಶಿಫಾರಸ್ಸುಗಳನ್ನು ಸರ್ಕಾರವು ಪರಿಗಣಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ ೯ ಎಸ್‌ಎಲ್‌ಸಿ ೯೦, ಬೆಂಗಳೂರು, ದಿನಾಂಕ ೨೩ನೇ ನವೆಂಬರ್ ೧೯೯೦**

ಡಾ. ಸರೋಜಿನಿ ಮಹಿಷಿ ಸಮಿತಿಯು ಸರ್ಕಾರಕ್ಕೆ ಸಲ್ಲಿಸಿದ್ದ ವರದಿಯಲ್ಲಿರುವ ಶಿಫಾರಸ್ಸುಗಳನ್ನು ಪರಿಶೀಲಿಸಿ ಆ ಶಿಫಾರಸುಗಳ ಬಗ್ಗೆ ಸಚಿವ ಸಂಪುಟದ ಉಪ ಸಮಿತಿಯು ಅನುಬಂಧದಲ್ಲಿ ನಮೂದಿಸಿರುವ ಶಿಫಾರಸುಗಳನ್ನು ಸರ್ಕಾರವು ಈ ಕೆಳಗೆ ನಮೂದಿಸಿರುವ ಮಾರ್ಪಾಟಿನೊಂದಿಗೆ ಅಂಗೀಕರಿಸಿದೆ ಮತ್ತು ಅನುಮೋದಿಸಿದೆ.

(೧) ಉದ್ಯೋಗ ವಿನಿಮಯ ಕೇಂದ್ರಗಳಲ್ಲಿ ನೋಂದಾಯಿಸಲು ಜನನ ಪ್ರಮಾಣ ಪತ್ರದ ಅವಶ್ಯಕತೆ ಇರುವುದಿಲ್ಲ; ಮತ್ತು

(೨) ಅಂಚೆ ಮುಖಾಂತರ ನೋಂದಾಯಿಸುವುದನ್ನು ತೆಗೆದುಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
ಸಹಿ.
**(ಕೆ.ಕೆ. ನಾಡ್‌ಗೀರ್)**
ಸರ್ಕಾರದ ಅಧೀನ ಕಾರ್ಯದರ್ಶಿ–೨,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ.
(ಸೇವಾ ನಿಯಮಗಳು)